ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಕೇಂದ್ರ ಸರ್ಕಾರದಿಂದ ಪಡೆದ ಅನುದಾನ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

26 (110) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2017-18, 2018-19 ಮತ್ತು 2019-20ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಪಡೆದ ಅನುದಾನ ಎಷ್ಟು; ಯಾವ ಯಾವ ಯೋಜನೆಗಳಿಗೆ ಇದನ್ನು ಉಪಯೋಗಿಸಲಾಗಿದೆ; ಅನುದಾನ ಬಳಕೆಯಾಗದೇ ಇರುವ ಯೋಜನೆಗಳಾವುವು; (ವಿವರ ನೀಡುವುದು)

(ಆ) ಆರೋಗ್ಯ ಇಲಾಖೆಯ ಅನುದಾನ ಬಳಕೆಯಿಂದ ಆರೋಗ್ಯ ಕ್ಷೇತ್ರದಲ್ಲಿ ಸಾಧಿಸಿರುವ ಪ್ರಗತಿಯೇನು; ಸಾಮಾನ್ಯರಿಗೆ ಆರೋಗ್ಯದಲ್ಲಿ ಉಂಟಾದ ಬದಲಾವಣೆಗಳ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಆರೋಗ್ಯ ಇಲಾಖೆಯಲ್ಲಿ ಅನುದಾನ ದುರ್ಬಳಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗೂ ಎಷ್ಟು; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಈ) ಆರೋಗ್ಯ ಇಲಾಖೆಯಲ್ಲಿ ವೈದ್ಯರುಗಳು ಕರ್ತವ್ಯ ಲೋಪ ಎಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)